# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 977(81)

ಸದಸ್ಯರ ಹೆಸರು : ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ.

(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 20-12-2018

ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| 1 | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿರುವ ಜನರಲ್ ತಿಮ್ಮಯ್ಯನವರ ಮನೆಯಾದ "ಸನ್ನಿಸೈಡ್"ನ್ನು ಸ್ಮಾರಕವನ್ನಾಗಿ ಮಾಡಲು 2006-07ನೇ ಸಾಲಿನಲ್ಲಿ ಸರ್ಕಾರ ಘೋಷಣೆ ಮಾಡಿ, ಇದುವರೆಗೂ ಸ್ಮಾರಕ ಮಾಡುವ ಕಾರ್ಯ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಕಾರಣಗಳ ಸಮೇತ ವಿವರ ನೀಡುವುದು) | ಹೌದು.<br><br>ಜನರಲ್ ತಿಮ್ಮಯ್ಯನವರ ನಿವಾಸವನ್ನು R.T.O ಕಛೇರಿಯಾಗಿ ಬಳಕೆಯಾಗುತ್ತಿದ್ದುದ್ದನ್ನು ತೆರವುಗೊಳಿಸಿ, ಕನ್ನಡ ಸಂಸ್ಕೃತಿ ಇಲಾಖೆಯ ವಶಕ್ಕೆ ಪಡೆಯಲಾಗಿದ್ದು, ದಿನಾಂಕ 19.01.2016ರಲ್ಲಿ ಜನರಲ್ ತಿಮ್ಮಯ್ಯನವರ ಸ್ಮಾರಕ ಕಾಮಗಾರಿಯನ್ನು ಪ್ರಾರಂಭ ಮಾಡಲಾಗಿದ್ದು. ಕಾಮಗಾರಿಯು ಪ್ರಗತಿಯಲ್ಲಿದೆ. |
| 2 | ಈ ಕಾರ್ಯಕ್ಕೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಲಾದ ಅನುದಾನವೆಷ್ಟು; ಈ ಸ್ಮಾರಕವನ್ನು ನಿರ್ಮಾಣ ಮಾಡಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಲಾಗುವುದೇ; | ಸದರಿ ಸ್ಮಾರಕ ನಿರ್ಮಾಣಕ್ಕಾಗಿ ಒಟ್ಟಾರೆ ರೂ.550.00ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ : ಕಸಂವಾ 1207 ಕಸಧ 2013 ದಿನಾಂಕ: 03-03-2014 ರಲ್ಲಿ ರೂ. 45.00 ಲಕ್ಷಗಳನ್ನು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 197 ಕಸಧ 2017 ದಿನಾಂಕ: 18-12-2017ರಲ್ಲಿ 230.00 ಲಕ್ಷಗಳನ್ನು ಸೇರಿಸಿ ಒಟ್ಟು ರೂ.275.00 ಲಕ್ಷಗಳನ್ನು ಸಕಾಋರ ಬಿಡುಗಡೆ ಮಾಡಿದೆ. ಜನರಲ್ ತಿಮ್ಮಯ್ಯನವರ ಸ್ಮಾರಕ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| 3 | ಯಾವ ಕಾಲಮಿತಿಯಲ್ಲಿ ಸ್ಮಾರಕ ಕಾಮಗಾರಿ ಮುಗಿಸಲಾಗುವುದು? (ಮಾಹಿತಿ ನೀಡುವುದು) | ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಕಸಂವಾ 69 ಕವಿಸ 2018

(ಡಾ. ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು